**KARNATAKA GOVERNMENTDEPARTMENT OF PUBLIC EDUCATION**
COMMISSIONER OFFICE, New Public Office, Nrupathunga Road, Bengaluru

**KARNATAKAGOVERNMENT PUBLIC EDUCATION DEPARTMENT**
**DEPUTY DIRECTOR OFFICE**
**KOLAR DISTRICT**

## FIRST RENEWAL / RECOGNITION RENEWAL

NO: 23675 DATE: 27-Jul-2022

**Subject:** children's Right to Education Act 2009 and Karnataka Education Act 1983under these rule granting of school renewal.

As per the above said subject Arka Educational and Cultural Trust under the administration DISE Code no.29191311015TheJain International School – Oorgaumpet Post[address] 1-8 grade English medium school renewal recognition school [First Renewal /Recognition Renewal)the application submitted through online was inspected by the department authorities verified the documents and land inspection was inspected. 01-Jun-2022 to till 01-May-2027the renewal is granted under the below mentioned conditions.

| Sl.no | Details | Online application no: 23675 |
|---|---|---|
| 1 | Name of the Trust and Address | Arka Educational and Cultural Trust |
| 2 | Name of the school and address | The Jain international School,<br>Oorgaumpet post |
| 3 | Dise Code No: | 29191311015 |
| 4 | First Renewal / Recognition Renewal for the Academic Year | 2022-2023 to 2026-2027 till |
| 5 | Class/ Section Medium 1 to 5, 1 to 8, (1 to 10 or 9 & 10 class) | Class: 1 to 8,<br>Section: 16,<br>Medium: English |
| 6 | Unaided School/ Aided School permission grant for First Renewal / Recognition Renewal issued | Pvt Unaided/ Renewal Recognition |

NOTARY THANGARAJ. S K.G.F. - 563 117 Kolar Dist. Reg. No. 10151 GOVT. OF INDIA

NO OF CORRECTIONS

Principal
THE JAIN INTERNATIONAL SCHOOL
Krishnapuram, Oorgaumpet Post,
K.G.F - 563 121

**Conditions:**

1. Children's Education Act 2009 and Karnataka Education Act 1983 under rules framed the school is registered. The registered school is allowed to run the classes for 1to 5, 1 to 8, 6 to 8, 9 and 10 and 1 to 10. No permit is given to run extra classes.
2. The school has to follow the rules act framed under Karnataka School Education Act 1983 and Children's Rights to Education Act 2009.
3. As per the rules framed under children's education act 2009 min 25% of seats should be reserved for weaker Children the government will have the authority to allot the RTE seats under the RTE Act. The government has permitted to admit the child in the neighborhood schools and provide free and compulsory education till completion of Primary Education also the school shall follow the norms so that the children admitted shall not be discriminated from the rest of the children or segregated or treated separately in any manner.
4. As per the point no. 3 the children enrolled under the RTE Act children' fees will be released by the government as per the rules and the schools are restricted to collect any fees from the RTE students.
5. The school or the school management is restricted to collect any kind of capitation fee / donations/ in any manner either at the time of enrollment or thereafter it is strictly restricted.
6. The School/ Trust in there school collecting fees from students' parents' information as per the State Government notification no. Ed31pgc2019, dated 27/07/2019 under information department website and school notice board should be displayed, apart from approved fees no extra fees should be collected.
7. School/ Trust students should be enrolled as per the government given timeline.
8. The school/ Management enrollment cannot be denied against the following factors
   a) Due to lack of age proof
   b) On grounds of caste/ religion/ place of birth/ language
   c) Post admission deadline if admission requested
9. As per RTE Act and Karnataka Education Act all safety measures should be taken (from concerned authority Building Safety Certificate, Fire Safety and K.S.C.P.C.R and N.C.P.C.R under safety)
10. School / trust management as per below
    a) Admission taken any child in school till Primary Education and Middle School till completion the school is not allowed to dismiss or back hold.

NO. OF CORRECTIONS

Principal
THE JAIN INTERNATIONAL SCHOOL
Krishnapuram, Oorgaumpet Post,
K.G.F - 563 121

b) No child should be mentally or physically tortured
c) No child is required to write any board examination till the completion of primary education
d) Every child will be awarded a certificate after completing the primary education laid down under the RTE rule 21and Karnataka Education Act
e) As per the RTE Act and Karnataka Education Act special child are allowed to admit in the school
f) As per the RTE and Karnataka Education Act the teachers will be appointed as per the Government prescribed with minimum qualification.
g) The salary will be paid as per the Government norms followed by the RTE and Karnataka Education Act with the EPF. FD will be paid through the bank under the Employee State Insurance.
h) The teachers perform the duties prescribed under section 24(1) of the Act and rule 17 of the RTE rules and shall not engage themselves in private tuitions or monetary conditions.

11. The school should follow the given curriculum textbooks and syllabus as affiliated.
12. As per the Karnataka Education Act, Section 19, the school is allowed to permit the students as per the School infrastructure.
13. Employees should be taken as specified under section 19 school standard rule.
14. The school shall not run any unauthorized classes or section either within the school premises or outside.
15. The school building and other infrastructure facilities should not be used either during day or night for any commercial activities or for political and non-educational activities
16. The school shall not be run for profit to any individual or group or association of persons
17. The accounts of the school are audited by a Charted Accountant and a copy of such audited statements is sent to DDPI / BEO by end of June every year
18. The school shall compulsorily follow the instructions contained in Karnataka Education Act – 1983
19. As per RTE Act and Karnataka Education Act School/ Management and teachers should follow and act as per the conditions.
20. The School / Management should follow all the rules and regulation laid down ~~in~~ as per the governing rules
21. Every year by the end of the March SATS should be uploaded as per the rules.

GOVT. OF INDIA NOTARY THANGARAJ. S Reg. No. 10152 K.G.F - 563 117, Kolar Dist.

NO OF CORRECTIONS

Principal
THE JAIN INTERNATIONAL SCHOOL
Krishnapuram, Oorgaumpet Post,
K.G.F - 563 121

22. If the School denied following the above said conditions as per the rules framed under RTE Act 2009 and Karnataka Education Act 1983, the School's recognition will be cancelled.

Deputy Director (Administration)

Public Education Department
Kolar (2919) Dist.

1. Related administration Arka Educational and Cultural Trust
2. Head master, / Oorgaumpet Post/ The Jain International School
3. B.E.O KGF(291913) Taluk / Post Kolar (2919) dist.
4. Office copy

Principal
THE JAIN INTERNATIONAL SCHOOL
Krishnapuram, Oorgaumpet Post,
K.G.F - 563 121

NOTARY
THANGARAJ. S
K.G.F. - 563 117, Kolar Dist.
Reg. No. 10152
GOVT. OF INDIA

ATTESTED
THANGARAJ S
ADVOCATE & NOTARY
GOVT OF INDIA
Reg No 10152

# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ

## ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,

**KOLAR ಜಿಲ್ಲೆ.**

ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಪ್ರಮಾಣ ಪತ್ರ

**ಸಂಖ್ಯೆ: 23675** **ದಿನಾಂಕ: 27-Jul-2022**

**ವಿಷಯ:** ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **ARKA EDUCATIONAL CULTURAL TRUST** ಆಡಳಿತ ಮಂಡಳಿಯು **29191311015** ಡೈಸ್ ಕೋಡ್ ಸಂಖ್ಯೆ **THE JAIN INTERNATIONAL SCHOOL-Oorgaumpet post** ಶಾಲೆಗೆ [ವಿಳಾಸ], **1 - 8** ತರಗತಿವರೆಗೆ **Kannada,English** ಮಾಧ್ಯಮ **Renewal Recognition** ಶಾಲಾ [ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ] ಮಾನ್ಯತೆಯನ್ನು ನವೀಕರಿಸಲು ಆನ್‌ಲೈನ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ಇಲಾಖೆಯ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ, **01-Jun-2022** ಸಾಲಿನಿಂದ **31-May-2027** ಸಾಲಿನವರೆಗೆ ಈ ಕೆಳಕಂಡ ಷರತ್ತುಗಳೊಂದಿಗೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ | ವಿವರ | ಆನ್ಲೈನ್ ಅರ್ಜಿ ಸಂಖ್ಯೆ :- 23675 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | **ARKA EDUCATIONAL CULTURAL TRUST** |
| 2 | ಶಾಲೆಯ ಹೆಸರು ಮತ್ತು ವಿಳಾಸ | **THE JAIN INTERNATIONAL SCHOOL-Oorgaumpet post** |
| 3 | ಡೈಸ್ ಕೋಡ್ ಸಂಖ್ಯೆ: | **29191311015** |
| 4 | ಪ್ರಥಮ ಮಾನ್ಯತೆ / ಮಾನ್ಯತೆ<br>ನವೀಕರಣ ಮಾಡಿದ ಶೈಕ್ಷಣಿಕ ಸಾಲು (ಅವಧಿ) | **2022-2023 ಸಾಲಿನಿಂದ 2026-2027 ರವರೆಗೆ** |
| 5 | ತರಗತಿ/ ವಿಭಾಗ/ ಮಾಧ್ಯಮ1 ರಿಂದ 5, 1 ರಿಂದ 8, 6 ರಿಂದ 8, (1 ರಿಂದ 10 ಅಥವಾ 9 ಮತ್ತು 10 ತರಗತಿಗಳು) | ತರಗತಿ : **1 to 8**<br>ತಲಾ ವಿಭಾಗಗಳು : **16**<br>ಮಾಧ್ಯಮ : **Kannada,English** |
| 6 | ಶಾಲೆಯನ್ನು ಅನುದಾನ ಸಹಿತ/ ಅನುದಾನ ರಹಿತ ವಾಗಿ ಪ್ರಥಮ ಮಾನ್ಯತೆ ಮಾನ್ಯತೆ ನವೀಕರಣ ನೀಡಿದೆ | **Pvt. Unaided / Renewal Recognition** |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿದ್ದು, ನೋಂದಾಯಿಸಿದ ಶಾಲೆಯ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. [ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ] **1to 5th** [1 ರಿಂದ 5, 1 ರಿಂದ 8, 6 ರಿಂದ 8, 9 ಮತ್ತು 10 ಹಾಗೂ 1 ರಿಂದ 10] ಈ ಶಾಲೆಗಳ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.
2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.
3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ-ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.
4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಭಂದಿಸಿದೆ.
5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಛೆಯಿಂದ ನೀಡುವ ಡೊನೇಷನ್‌ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಭಂದಿಸಿದೆ.
6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.
7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.
8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

   (i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ-21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ಇSI) ಒಳಪಡಿಸುತ್ತದ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್-24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ-17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್‌ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ಪ್ರಾಧಿಕಾರದ ಪಠ್ಯಕ್ರಮ ಮತ್ತು ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳು ಸೆಕ್ಷನ್-19ರಲ್ಲಿ ಸೂಚಿಸದಂತೆ ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳಿಗೆ ಅನುಗುಣವಾಗಿ ಶಾಲೆಯು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುವುದು.

13. ಸೆಕ್ಷನ್-19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

14. ಶಾಲೆಯ ಆವರಣದಲ್ಲಿ ಅಥವಾ ಹೊರಗೆ ಅನಧಿಕೃತವಾಗಿ ತರಗತಿ / ವಿಭಾಗಗಳನ್ನು (ಬ್ರಾಂಚ್) ತೆರಯಬಾರದು.

15. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

16. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

17. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್‌ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

18. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ-2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

19. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

20. ಶಾಲ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

21. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್‌ನಲ್ಲಿ ಶಾಲಾ ಮಾಹಿತಿಯನ್ನು ನಿಯಮಾನುಸಾರ ಅಪ್‌ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

**KOLAR(2919)** ಜಿಲ್ಲೆ

27/7/22.

1. ಸಂಬಂಧಿಸಿದ ಆಡಳಿತ ಮಂಡಳಿ **ARKA EDUCATIONAL CULTURAL TRUST**

2. ಮುಖ್ಯ ಶಿಕ್ಷಕರು, / Oorgaumpet post / **THE JAIN INTERNATIONAL SCHOOL**

3. ಕ್ಷೇತ್ರ ಶಿಕ್ಷಣಾಧಿಕಾರಿಗಳು, K G F(291913) ತಾಲ್ಲೂಕು/ವಲಯ KOLAR(2919) ಜಿಲ್ಲೆ.

4. ಕಛೇರಿ ಪ್ರತಿ.